ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-ADMI0EST(3)/1/2024-JD-

ಆಯುಕ್ತರ ಕಚೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು 01,ದಿನಾಂಕ:18.10.2024

**ಸುತ್ತೋಲೆ**

ವಿಷಯ: ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಗೌರವಧನ ಹಾಗೂ ಹೆಚ್ಚುವರಿ ಗೌರವಧನ ಪಾವತಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 16 ಟಿಪಿಇ 2017,ದಿ:11.12.2019
2. ಸರ್ಕಾರದ ಪತ್ರ ಸಂ: ಇಡಿ 174 ಡಿಟಿಇ 2020, ದಿ:22.12.2020.
3. ಸರ್ಕಾರದ ಆದೇಶ ಸಂ: ಇಡಿ 52 ಡಿಟಿಇ 2024, ದಿ:04.03.2024.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 122 ಡಿಟಿಇ 2023, ದಿ:12.08.2024.
5. ಸರ್ಕಾರದ ಆದೇಶ ಸಂಖ್ಯೆ: ಇಡಿ 122 ಡಿಟಿಇ 2023, ದಿ:27.09.2024.
6. ಈ ಕಛೇರಿ ಅಧಿಸೂಚನೆ ಸಂ: DTE-ADMI0EST(3)/1/2024-JD-, ದಿ:30.09.2024.
7. ಪ್ರಾಂಶುಪಾಲರುಗಳ ದೂರವಾಣಿ ಕರೆಗಳು.

******

ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಗೌರವಧನ ಹಾಗೂ ಹೆಚ್ಚುವರಿ ಗೌರವಧನ ಪಾವತಿಸುವ ಬಗ್ಗೆ ಕೆಲವು ಸ್ಪಷ್ಟೀಕರಣಗಳನ್ನು ಕೋರಿ ಅನೇಕ ಪ್ರಾಂಶುಪಾಲರು ಆಯುಕ್ತಾಲಯಕ್ಕೆ ದೂರವಾಣಿ ಕರೆಗಳನ್ನು ಮಾಡುತ್ತಿದ್ದು, ತತ್ಸಂಬಂಧ ಈ ಕೆಳಕಂಡಂತೆ ಸ್ಪಷ್ಟೀಕರಣ ನೀಡಲಾಗಿದೆ.

- ಉಲ್ಲೇಖ(3) ರಲ್ಲಿನ ಸರ್ಕಾರಿ ಆದೇಶದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಹೆಚ್ಚುವರಿ ಗೌರವಧನ, ಇಡಿಗಂಟು ಹಾಗೂ ಆರೋಗ್ಯ ವಿಮೆ ಸೌಲಭ್ಯಗಳನ್ನು ದಿ:01.01.2024 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲಾಗಿರುತ್ತದೆ. ಆದ್ದರಿಂದ ಜನವರಿ-2024 ರ ಮಾಹೆಯಿಂದ ಅರೆಕಾಲಿಕ ಉಪನ್ಯಾಸಕರುಗಳಿಗೆ ಸೇವಾವಧಿಗೆ ಅನುಗುಣವಾಗಿ ಹೆಚ್ಚುವರಿ ಗೌರವಧನ (ರೂ5000/-, ರೂ6000/-, ರೂ7000/- ಹಾಗೂ ರೂ.8000/-) ಮತ್ತು ಉಲ್ಲೇಖ(1) ರ ಆದೇಶ ಹಾಗೂ ಉಲ್ಲೇಖ(2)ರ ಸರ್ಕಾರದ ಪತ್ರದಂತೆ ಅನುಕ್ರಮವಾಗಿ ಸರ್ಕಾರಿ ಪಾಲಿಟೆಕ್ನಿಕ್/ತಾಂತ್ರಿಕ ಕಿರಿಯ ಶಾಲೆ ಅತಿಥಿ ಉಪನ್ಯಾಸಕರಿಗೆ ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆ ಇದ್ದಲ್ಲಿ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರಿಗೆ ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆ ಇದ್ದಲ್ಲಿ ಪೂರ್ಣ ಪ್ರಮಾಣದ ಗೌರವಧನ ಹಾಗೂ ಹೆಚ್ಚುವರಿ ಗೌರವಧನವನ್ನು ಪಾವತಿಸುವುದು. ಪೂರ್ಣ ಪ್ರಮಾಣದ ಕಾರ್ಯಭಾರವಿಲ್ಲದಿದ್ದಲ್ಲಿ ಅಂತಹ ಅರೆಕಾಲಿಕ ಉಪನ್ಯಾಸಕರುಗಳಿಗೆ ಕಾರ್ಯಭಾರಕ್ಕೆ ಅನುಗುಣವಾಗಿ

...2

CamScanner

ಗೌರವಧನ ಹಾಗೂ ಹೆಚ್ಚುವರಿ ಗೌರವಧನವನ್ನು ಪಾವತಿಸಲು ಕ್ರಮಕೈಗೊಳ್ಳುವುದು. ಅತಿಥಿ ಉಪನ್ಯಾಸಕರುಗಳಿಗೆ ಮುಂದುವರೆದು ಆರೋಗ್ಯ ವಿಮೆ ಸೌಲಭ್ಯವನ್ನು ಅತಿಥಿ ಉಪನ್ಯಾಸಕರಿಂದ ವಂತಿಗೆ ವಿಸ್ತರಿಸಲು ಕ್ರಮ ಕೈಗೊಳ್ಳುತ್ತಿರುವುದರಿಂದ ಅತಿಥಿ ಉಪನ್ಯಾಸಕರಿಂದ ವಂತಿಗೆ ರೂಪದಲ್ಲಿ ಮಾಸಿಕ ರೂ.400/- ಗಳನ್ನು ಮುಂದಿನ ಆದೇಶದವರೆಗೂ ಕಟಾಯಿಸದಿರಲು ಸೂಚಿಸಲಾಗಿದೆ.

- ಉಲ್ಲೇಖ(4) ಮತ್ತು ಉಲ್ಲೇಖ(5) ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಅತಿಥಿ ಉಪನ್ಯಾಸಕರಿಗೆ ಕ್ರಮವಾಗಿ ಗರಿಷ್ಠ 15/17/14 ಗಂಟೆಗಳ ಕಾರ್ಯಭಾರ ನಿಗಧಿಪಡಿಸಿ ಮಾಸಿಕ ಗೌರವಧನ ಹೆಚ್ಚಿಸಿ ಆದೇಶಿಸಲಾಗಿರುತ್ತದೆ. ಉಲ್ಲೇಖ(6) ರ ಅಧಿಸೂಚನೆಯಲ್ಲಿ Retain List ಮುಖಾಂತರ ಆಯ್ಕೆಗೊಂಡು ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ 15/17/14 ಗಂಟೆಗಳ ಕಾರ್ಯಭಾರ ನೀಡಿದ ದಿನಾಂಕದಿಂದ ಉಲ್ಲೇಖ(5) ರಂತೆ ಗೌರವಧನ ಹಾಗೂ ಹೆಚ್ಚುವರಿ ಗೌರವಧನವನ್ನು ಪಾವತಿಸಲು ಕ್ರಮಕೈಗೊಳ್ಳಲು ಸೂಚಿಸಿದೆ. ಅತಿಥಿ ಉಪನ್ಯಾಸಕರಿಗೆ 15/17/14 ಗಂಟೆಗಳಿಗಿಂತ ಕಡಿಮೆ ಕಾರ್ಯಭಾರವಿದ್ದಲ್ಲಿ ಎಷ್ಟು ಗಂಟೆಗಳ ಕಾರ್ಯಭಾರ ಲಭ್ಯವಿದೆಯೋ ಅದಕ್ಕೆ ಅನುಗುಣವಾಗಿ ಗೌರವಧನ ಹಾಗೂ ಹೆಚ್ಚುವರಿ ಗೌರವಧನವನ್ನು ಪಾವತಿಸಲು ಕ್ರಮಕೈಗೊಳ್ಳುವುದು.
- ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಸರ್ಕಾರಿ ಪಾಲಿಟೆಕ್ನಿಕ್/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಆಯ್ಕೆಗೊಂಡು ಕಾರ್ಯವರದಿ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರುಗಳಿಗೆ ಅವರುಗಳು ಕಾರ್ಯವರದಿ ಮಾಡಿಕೊಂಡ ದಿನಾಂಕದಿಂದ ಕಾರ್ಯಭಾರಕ್ಕೆ ಅನುಗುಣವಾಗಿ ಗೌರವಧನ ಹಾಗೂ ಹೆಚ್ಚುವರಿ ಗೌರವಧನವನ್ನು ಪಾವತಿಸಲು ಕ್ರಮವಹಿಸುವುದು.
- ಉಲ್ಲೇಖ(5) ರ ಸರ್ಕಾರದ ಆದೇಶದಲ್ಲಿ ಅತಿಥಿ ಉಪನ್ಯಾಸಕರನ್ನು ಪ್ರತಿ ಶೈಕ್ಷಣಿಕ ವರ್ಷದಲ್ಲಿ 10 ತಿಂಗಳಿಗೆ ಮಾತ್ರ ನೇಮಕ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಪ್ರತಿ ಸೆಮಿಸ್ಟರ್ ಅನ್ನು 5 ತಿಂಗಳು( ಪರೀಕ್ಷಾ ಕಾರ್ಯಗಳು, ಮೌಲ್ಯಮಾಪನ ಕಾರ್ಯಗಳು, ಇತರೆ ಶೈಕ್ಷಣಿಕ ಕಾರ್ಯಗಳು) ಎಂದು ಪರಿಗಣಿಸಿ ಗೌರವಧನ ಪಾವತಿಸಲು ಕ್ರಮವಹಿಸುವುದು.

**ನಿರ್ದೇಶಕರು**
ತಾಂತ್ರಿಕ ಶಿಕ್ಷಣ ಇಲಾಖೆ,ಬೆಂಗಳೂರು

18/10/24

ಪ್ರತಿ:-

1. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ (ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ)
2. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು

CamScanner